# ಕರ್ನಾಟಕ ವಿಧಾನ ಪರಿಷತ್ತು

01 **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 395

02 **ಮಾನ್ಯ ಸದಸ್ಯರ ಹೆಸರು** : **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)**

03 **ಉತ್ತರಿಸುವ ದಿನಾಂಕ** : **15.02.2024**

04 **ಉತ್ತರಿಸುವ ಸಚಿವರು** : **ಮಾನ್ಯ ಗೃಹ ಸಚಿವರು**

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿದೇಶಿಯರುಗಳು ತಮ್ಮ ವೀಸಾ ಅವಧಿ ಮುಗಿದರೂ ಕೂಡಾ ಅಕ್ರಮವಾಗಿ ವಾಸ ಮಾಡುತ್ತಿರುವುದು ಹಾಗೂ ವಿವಿಧ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಬಂದಿದೆ.<br>ವಿದೇಶಿಯರು ತಮ್ಮ ವೀಸಾ ಅವಧಿ ಮುಗಿದರೂ ಕೂಡ ಅಕ್ರಮವಾಗಿ ವಾಸಿಸುತ್ತಿರುವ ಹಾಗೂ ವಿವಿಧ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ.<br>• ರಾಜ್ಯದಲ್ಲಿ ಅವಧಿ ಮೀರಿ ವಾಸವಾಗಿರುವ ವಿದೇಶಿ ಪ್ರಜೆಗಳು ಪತ್ತೆಯಾದಲ್ಲಿ ಅಂತಹ ಆರೋಪಿಗಳನ್ನು ಅವರ ದೇಶದ ರಾಯಭಾರಿ ಕಚೇರಿಯ(Embassy) ಮೂಲಕ ಆಯಾ ದೇಶಗಳಿಗೆ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ (Ministry of External Affairs) ಮಾಹಿತಿಯನ್ನು ನೀಡಲಾಗುತ್ತಿದೆ.<br>• ವಿವಿಧ ಅಪರಾಧಗಳಲ್ಲಿ ಭಾಗಿಯಾಗಿರುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಗಿ (Exit Permit) ಯನ್ನು ಪಡೆಯುವವರೆಗೆ, ಅವರನ್ನು Foreigners Detention Centre ನಲ್ಲಿ ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ಸಂಬಂಧಿಸಿದ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.<br>• ರಾಜ್ಯದಲ್ಲಿ ವೀಸಾ ಅವಧಿ ಮುಗಿದ ನಂತರವೂ ನೆಲೆಸಿರುವ ವಿದೇಶಿ ಪ್ರಜೆಗಳನ್ನು ಆಯಾ ಪೊಲೀಸ್ ಠಾಣೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ಪತ್ತೆ ಮಾಡಿ ಕ್ರಮ ಕೈಗೊಳ್ಳುವಂತೆಯೂ ಹಾಗೂ ಪತ್ತೆ ಮಾಡಲು ಠಾಣೆಗಳಿಂದ ನುರಿತ ಅಧಿಕಾರಿ ಮತ್ತು ಸಿಬ್ಬಂದಿಯವರನ್ನು ನೇಮಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>• ಹೆಚ್ಚು ವಿದೇಶಿ ಪ್ರಜೆಗಳು ವಾಸಿಸುವ ಸ್ಥಳಗಳ ಸತತ ನಿಗಾವಹಿಸಲು ಮೀಸಲು ಪಡೆ ಹಾಗೂ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮ ಜರುಗಿಸಲು ಸೂಚಿಸಲಾಗಿರುತ್ತದೆ.<br>• ಅವಧಿಮೀರಿ ಮತ್ತು ಅಕ್ರಮವಾಗಿ ವಾಸವಾಗಿರುವ ವಿದೇಶಿ ಪ್ರಜೆಗಳು ಕಂಡುಬಂದಲ್ಲಿ ಅಂತವರ ವಿರುದ್ಧ ಕಾನೂನು ಅಡಿಯಲ್ಲಿ ಕ್ರಮ ಜರುಗಿಸಿ ಮುಂದಿನ ಆದೇಶದವರೆಗೆ ಬಂಧನ (Foreigners Detention Centre) ಕೇಂದ್ರಕ್ಕೆ ಬಿಡಲಾಗುತ್ತಿದೆ ಮತ್ತು ಮಾನ್ಯ ನ್ಯಾಯಾಲಯವು ಗಡಿಪಾರು ಮಾಡಲು ಆದೇಶಿಸಿದಲ್ಲಿ ಸೂಕ್ತ ಕ್ರಮ ಜರುಗಿಸಲಾಗುತ್ತಿದೆ.<br>• ವಿದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಲು ಸಹಕಾರ ನೀಡುವವರ ಮತ್ತು ಶೈಕ್ಷಣಿಕ ಸಂಸ್ಥೆಗಳ ವಿರುದ್ಧವೂ ಸಹ ಸೂಕ್ತ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |

**ಆ)** ಪ್ರಸ್ತುತ ರಾಜ್ಯದಲ್ಲಿ ವೀಸಾ ಅವಧಿ ಇರುವ ಮತ್ತು ಅವಧಿ ಮುಗಿದು ಅಕ್ರಮವಾಗಿ ವಾಸ ಮಾಡುತ್ತಿರುವವರ ಸಂಖ್ಯೆ ಎಷ್ಟು; ಅಪರಾಧಗಳಲ್ಲಿ ಭಾಗಿಯಾಗಿರುವವರ ಸಂಖ್ಯೆ ಎಷ್ಟು; ಇಂತವರ ಮೇಲೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

ಪ್ರಾದೇಶಿಕ ವಿದೇಶಿ ನೋಂದಣಾಧಿಕಾರಿ, ಬೆಂಗಳೂರು (FRRO, Bengaluru) ರವರ ಮಾಹಿತಿಯಂತೆ ಪ್ರಸ್ತುತ ರಾಜ್ಯದಲ್ಲಿ ವೀಸಾ ಅವಧಿ ಇರುವ ಮತ್ತು ಅವಧಿ ಮುಗಿದು ಅಕ್ರಮವಾಗಿ ವಾಸ ಮಾಡುತ್ತಿರುವವರ ಸಂಖ್ಯೆ ಹಾಗೂ ಅಪರಾಧ ಕ್ರಮಗಳಲ್ಲಿ ಭಾಗಿಯಾಗಿರುವವರ ಸಂಖ್ಯೆ ಈ ಕೆಳಕಂಡಂತಿರುತ್ತದೆ.

| ರಾಜ್ಯದಲ್ಲಿ ವೀಸಾ ಅವಧಿ ಇರುವ ವಿದೇಶಿಯರುಗಳ ಸಂಖ್ಯೆ | ರಾಜ್ಯದಲ್ಲಿ ಅವಧಿ ಮುಗಿದು ಅಕ್ರಮವಾಗಿ ವಾಸ ಮಾಡುತ್ತಿರುವ ವಿದೇಶಿಯರುಗಳ ಸಂಖ್ಯೆ | ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ವಿದೇಶಿಯರುಗಳ ಸಂಖ್ಯೆ (ಕಳೆದ 03 ವರ್ಷಗಳಲ್ಲಿ) |
|---|---|---|
| **24665** | **743** | **610** |

**'ಅ' ರಲ್ಲಿ ಉತ್ತರಿಸಿದೆ.**

**ಇ)** ರಾಜ್ಯದಲ್ಲಿ ವಿದೇಶಿಯರು ಗಳು ಅಕ್ರಮವಾಗಿ ನೆಲೆಸಿ ವಿದೇಶಿ ಡ್ರಗ್ಸ್ ಸರಬರಾಜು, ಕೊಕೇನ್, ಎಂಡಿಎಂ ಕ್ರಿಸ್ಟಲ್, ಅಫೀಮು, ಸಿಂಥೆಟಿಕ್ಸ್ ಡ್ರಗ್ಸ್ ಹಾಗೂ ಇತ್ಯಾದಿ ಮಾದಕ ವಸ್ತುಗಳ ಮಾರಾಟ / ಸಾಗಣಿಯಲ್ಲಿ ಭಾಗಿಯಾಗಿ ರಾಜ್ಯದ ಯುವ ಜನತೆಯನ್ನು ಮಾದಕ ಲೋಕಕ್ಕೆ ನೂಕುತ್ತಿರುವ ಪ್ರಕರಣಗಳು ಮಾಧ್ಯಮ ಗಳಲ್ಲಿ ವರದಿಯಾಗುತ್ತಿದ್ದು, ಇದು ಅಂತರಾಷ್ಟ್ರೀಯ ಮಟ್ಟದಲ್ಲಿ ರಾಜ್ಯಕ್ಕೆ ಕಪ್ಪು ಚುಕ್ಕೆಯಾಗಿ ಪರಿಣಮಿಸು ವುದಿಲ್ಲವೇ; ಇದನ್ನು ತಡೆಗಟ್ಟುವಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

- ರಾಜ್ಯದಲ್ಲಿ ಪೊಲೀಸರು ಮೇಲಿಂದ ಮೇಲೆ ವಿದೇಶಿಯರ ನೆಲೆಗಳ ಮೇಲೆ ದಾಳಿಗಳನ್ನು ಕೈಗೊಂಡು ಅಕ್ರಮ——— ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ ವಿದೇಶಿಯರ ಮೇಲೆ ಪ್ರಕರಣ ದಾಖಲು ಮಾಡುವುದಲ್ಲದೆ ವೀಸಾ ಮತ್ತು ಪಾಸ್‌ಪೋರ್ಟ್ ಅವಧಿ ಮುಗಿದ ವಿದೇಶಿಯರನ್ನು ಅವರ ದೇಶಕ್ಕೆ ಕಳುಹಿಸಲು ಫಾರಿನರ್ಸ್ ಡಿಟೆಂಷನ್ ಸೆಂಟರ್‌ಗಳಿಗೆ ಸೇರಿಸಲಾಗುತ್ತಿದೆ ಹಾಗೂ ಎಫ್.ಆರ್.ಆರ್.ಓ., ಬೆಂಗಳೂರು ರವರ ಮೂಲಕ ಅವರ ದೇಶಕ್ಕೆ ವಾಪಸ್ಸು ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆ ನೀಡುವ ಮಾಲೀಕರುಗಳಿಗೆ ವಿದೇಶಿಯರುಗಳ ಮಾಹಿತಿಯನ್ನು ಕಡ್ಡಾಯವಾಗಿ ಸರಹದ್ದಿನ ಪೊಲೀಸ್ ಠಾಣೆಗಳಿಗೆ ನೀಡಲು ಸೂಚಿಸಿ ಕ್ರಮ ಕೈಗೊಳ್ಳಲಾಗಿದೆ.
- ಸಾರ್ವಜನಿಕರಿಂದ ಮಾದಕ ವಸ್ತುಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ಸಂಗ್ರಹಿಸಲು ಟೋಲ್ ಫ್ರೀ ದೂರವಾಣಿ ಸಂಖ್ಯೆಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.
- ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆಯನ್ನು ನಡೆಸಿ ಮಾದಕ ವಸ್ತುಗಳ ಮಾರಾಟ/ಸೇವನೆಯ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಪ್ರಕರಣಗಳಲ್ಲಿ ಭಾಗಿಯಾದ ವಿದೇಶಿಯರಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿದೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.
- ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾದ ಮೂರು ಜನ ವಿದೇಶಿಯರ ವಿರುದ್ಧ PIT-NDPS (Prevention of illicit Traffic in Narcotic Drugs and Psychotropic Substances Act) ರ ಅಡಿಯಲ್ಲಿ ಬಂಧನದ ಆದೇಶ ಮಾಡಲಾಗಿರುತ್ತದೆ.
- ರಾಜ್ಯದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ

| | | |
|---|---|---|
| | | ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿರುತ್ತದೆ.<br>• ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಿಗೆ ಭೇಟಿ ನೀಡಿ ಅರಿವು ಮೂಡಿಸುವ ಕಾರ್ಯಕ್ರಮ ಮತ್ತು ವಿದೇಶಿ ಪ್ರಜೆಗಳ ಸಭೆ ನಡೆಸಿ ಇಂತಹ ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗದಂತೆ ಎಚ್ಚರಿಕೆ ನೀಡಿ ಈ ನೆಲದ ಕಾನೂನಿಗೆ ಗೌರವ ನೀಡಿ, ಸಹಬಾಳ್ವೆ ನಡೆಸುವ ಕುರಿತು ತಿಳುವಳಿಕೆ ನೀಡಲಾಗಿರುತ್ತದೆ |
| ಈ) | ಇಂತಹ ಅಕ್ರಮ ದಂಧೆಗಳನ್ನು ನಿಯಂತ್ರಣಕ್ಕೆ ತರಲು ಸರ್ಕಾರವು ರೂಪಿಸಿರುವ ಕಾನೂನುಗಳೇನು; ಅವುಗಳನ್ನು ಸಮರ್ಪಕವಾಗಿ ಜಾರಿ ಮಾಡಲಾಗುತ್ತಿದೆಯೇ?<br>(ಸಂಪೂರ್ಣ ಮಾಹಿತಿ ನೀಡುವುದು) | • ಅಕ್ರಮ ದಂಧೆಗಳಲ್ಲಿ ಭಾಗಿಯಾಗುವುದನ್ನು ನಿಯಂತ್ರಿಸಲು ಈಗಾಗಲೇ ರೂಪಿಸಲಾಗಿರುವ ಐ.ಪಿ.ಸಿ, ಫಾರಿನರ್ಸ್ ಆಕ್ಟ್, ಐ.ಟಿ. ಆಕ್ಟ್ ಮತ್ತು ಇತರ ಅಧಿನಿಯಮಗಳಡಿಯಲ್ಲಿ ಕಾನೂನು ವ್ಯಾಪ್ತಿಯಲ್ಲಿ ಕ್ರಮ ಜರುಗಿಸಲಾಗುತ್ತಿದೆ ಹಾಗೂ ಇತರ ವಿಶೇಷ ಪ್ರಕರಣಗಳಲ್ಲಿಯೂ ಕೂಡ ಈ ಕೆಳಕಂಡಂತೆ ಸಮರ್ಪಕವಾಗಿ ಜಾರಿ ಮಾಡಿ ಕ್ರಮ ಜರುಗಿಸಲಾಗುತ್ತಿದೆ.<br>• ಬೆಂಗಳೂರು ನಗರದಲ್ಲಿ ಇಂತಹ ಅಕ್ರಮ ದಂಧೆಗಳನ್ನು ನಿಯಂತ್ರಿಸುವ ಸಲುವಾಗಿ ಹೆಚ್ಚು ಬಾರಿ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳ ವಿರುದ್ಧ PIT-NDPS (Prevention of Illicit Traffic in Narcotic Drugs and Psychotropic Substances Act) ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಈಗಾಗಲೇ ಇಂತಹ ಮೂವರು ವಿದೇಶೀಯರ ವಿರುದ್ಧ ಬಂಧನದ ಆದೇಶ ಹೊರಡಿಸಲಾಗಿದೆ.<br>• ಇಂತಹ ಅಕ್ರಮ ದಂಧೆಗೆ ಸಹಕರಿಸುವ ವ್ಯಕ್ತಿಗಳ ವಿರುದ್ಧವೂ ಕೂಡ 14(b) of Foreigners Act 1946 ರ ಅಡಿ ಕ್ರಮ ಜರುಗಿಸಲಾಗುತ್ತಿದೆ. |

ಒಇ 53 ಪಿಎಂಎಸ್ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು